ದಿಃ 24.01.2023 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

**ಮುಖ್ಯ ವಿಚಾರಣೆಃ ಶ್ರೀ ಕೆ.ಎಸ್.ಎ., ವಕೀಲರಿಂದ ವಾದಿ ಪರವಾಗಿ**

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ದಾವಾ ಆಸ್ತಿಗಳಿಗೆ ಸಂಬಂದಪಟ್ಟಂತೆ ಒಟ್ಟು ಪಹಣಿಗಳನ್ನು ಹಾಜರು ಪಡಿಸಿದ್ದು ನಿಪಿ.1 ಎಂದು ಗುರುತಿಸಲಾಯಿತು, ಮುಟೇಷನ್ ರಿಜಿಸ್ಟರ್ ನ್ನು ಹಾಜರು ಮಾಡಿದ್ದು ನಿ.ಪಿ.2 ಎಂದು ಗುರುತಿಸಲಾಯಿತು, ಸರ್ವೆ ಸ್ಕೆಚ್ ನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.3 ಎಂದು ಗುರುತಿಸಲಾಯಿತು, ಕಂದಾಯ ರಸೀದಿಯನ್ನು ಹಾಜರು ಮಾಡಿದ್ದು ನಿ.ಪಿ.4 ಎಂದು ಗುರುತಿಸಲಾಯಿತು, ಸರ್ವೆ ಸ್ಕೆಚ್ ನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.5 ಎಂದು ಗುರುತಿಸಲಾಯಿತು, ಭೂ ಮಾಪಕರ ಸಮಕ್ಷಮ ನೀಡಿದ ಹೇಳಿಕೆಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.6 ಎಂದು ಗುರುತಿಸಲಾಯಿತು, ಪ್ರತಿವಾದಿಯ ಆಸ್ತಿಯ ಪಹಣಿ ಪತ್ರವನ್ನು ಹಾಜರು ಮಾಡಿದ್ದು ನಿ.ಪಿ.7 ಎಂದು ಗುರುತಿಸಲಾಯಿತು.
3. ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು ಶ್ರೀ ಯು.ಎಂ.ಎ ವಕೀಲರಿಂದ ಪ್ರತಿವಾದಿ ಪರವಾಗಿ**

4. ಪಾಟೀ ಸವಾಲು ಮಾಡಲು ಕಾಲವಕಾಶ ಕೋರಿದ್ದು, ನೀಡಲಾಯಿತು.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,**
**ಮೂಡಿಗೆರೆ.**

ದಿಃ 07.02.2023 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

**ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಕೆ.ಎಸ್.ಎ., ವಕೀಲರಿಂದ ವಾದಿ ಪರವಾಗಿ**

5. ವಿಭಾಗ ಪತ್ರದ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.8 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಶ್ರೀ ಯು.ಎಂ.ಎ ವಕೀಲರಿಂದ ಪ್ರತಿವಾದಿ ಪರವಾಗಿ**

6. ಪ್ರತಿವಾದಿ ಪರ ವಕೀಲರು ಗೈರು ಹಾಜರು, ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,**
**ಮೂಡಿಗೆರೆ.**

ಸಾಕ್ಷಿಯ ಸಹಿ

ಮಾ

ಮಧ್ಯಂತರ ಆದೇಶದ ಮೇರೆಗೆ ದಿಃ 25.11.2023 ರಂದು ಸಾಕ್ಷಿಗೆ ಪುನಃ ಕರೆಸಿ ಪ್ರಮಾಣ ವಚನ ಭೋದಿಸಲಾಯಿತು

**ಪಾಟೀ ಸವಾಲು ಶ್ರೀ ಯು.ಎಂ.ಎ ವಕೀಲರಿಂದ ಪ್ರತಿವಾದಿ ಪರವಾಗಿ**

7. ದಾವ ಆಸ್ತಿಯು ಒಟ್ಟು 4 ಎಕರೆ 10 ಗುಂಟೆ ಇರುತ್ತದೆ. ದಾವ ಆಸ್ತಿಯ ಪಶ್ಚಿಮ ದಿಕ್ಕಿಗೆ ಪ್ರತಿವಾದಿಯ ಆಸ್ತಿ ಇರುತ್ತದೆ. ದಾವ ಆಸ್ತಿಯ ಪಕ್ಕದಲ್ಲಿ ನನಗೆ ಸೇರಿದ 110/1 ಸರ್ವೆ ನಂಬರ್ ನ ಜಮೀನು ಇರುತ್ತದೆ. ದಾವ ಆಸ್ತಿಯ ಪೂರ್ವ ದಿಕ್ಕಿಗೆ ಸರ್ವೆ ನಂಬರ್ 110/1 ರ ಜಮೀನು ಇರುತ್ತದೆ. ಸರ್ವೆ ನಂಬರ್ 110/1 ಒಟ್ಟು 20 ಗುಂಟೆ ವಿಸ್ತೀರ್ಣ ಇರುತ್ತದೆ. ನನ್ನ ಜಮೀನು ಒತ್ತುವರಿಯಾಗಿರುವ ಬಗ್ಗೆ ನನಗೆ 2020 ರಲ್ಲಿ ಗೊತ್ತಾಗಿರುತ್ತದೆ. 2020 ರಲ್ಲಿ ನಾನು ಸರ್ವೆ ಮಾಡಿಸಿರುವುದಿಲ್ಲ. ಪ್ರತಿವಾದಿಯು ಅವರ ಜಮೀನನ್ನು ಗೌಡಳ್ಳಿಯ ಮಂಜೇಗೌಡರರಿಂದ ಕ್ರಯಕ್ಕೆ ಖರೀದಿ ಮಾಡಿರುತ್ತಾರೆ ಎಂದರೆ ಸರಿ. ನಾನು ಪ್ರತಿವಾದಿಯ ತಂದೆ ಗೋಪಾಲಗೌಡರ ವಿರುದ್ದ 2015 ರಲ್ಲಿ ದಾವೆಯನ್ನು ಸಲ್ಲಿಸಿರುತ್ತೇನೆ ಎಂದರೆ ಸಾಕ್ಷಿಯು ಮಂಜೇಗೌಡರ ವಿರುದ್ದ ದಾವೆಯನ್ನು ದಾಖಲು ಮಾಡಿರುತ್ತೇನೆ ಎಂದು ನುಡಿಯುತ್ತಾರೆ.

(ಮುಂದುವರೆದ ಪಾಟೀ ಸವಾಲಿಗೆ ಕಾಲವಕಾಶ ಕೋರಿದ್ದು, ನೀಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,**
**ಮೂಡಿಗೆರೆ.**

ಸಾಕ್ಷಿಯ ಸಹಿ

ಮಾ